**ದಿನಾಂಕಃ 18–02–2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟಿ ಸವಾಲುಃ ಆರೋಪಿ–2 ರಿಂದ 5 ರವರ ಪರ ವಕೀಲರಿಂದ**

ಮಹಜರ್ ಕಾಲಕ್ಕೆ ಹಾಜರಿರುವಂತೆ ಸೂಚಿಸಿ ಪೊಲೀಸರು ನನಗೆ ಯಾವುದೇ ನೋಟೀಸ್ ನೀಡಿರಲಿಲ್ಲ. ಪ್ರಕರಣದ ಫಿರ್ಯಾದುದಾರರು ಹಾಗೂ ನಾವು ಒಂದೇ ಕಟ್ಟಡದಲ್ಲಿ ವಾಸ ಎಂದರೆ ಸರಿ. ಮಹಜರಿನಲ್ಲಿ ಏನು ಬರೆದಿದೆ ಎಂಬುದನ್ನು ಪೊಲೀಸರು ನನಗೆ ಓದಿ ಹೇಳಿರುತ್ತಾರೆ. ಮಹಜರ್ ಕಾಲದಲ್ಲಿ ಹಾಜರಿದ್ದು ಸಹಿ ಮಾಡದೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆಂದರೆ ಸರಿಯಲ್ಲ. ಫಿರ್ಯಾದುದಾರರು ಹಾಗೂ ನಾನು ಒಂದೇ ಕಟ್ಟಡದಲ್ಲಿ ವಾಸ ಇರುವ ಕಾರಣ ಫಿರ್ಯಾದುದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

(ಸಾಕ್ಷಿಯ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ.ಸರಿ ಇದೆ.

2ನೇ ಅಧಿಕ ಜಿಲ್ಲಾ ಮತ್ತು ಸೆಷನ್ಸ್
ನ್ಯಾಯಾಧೀಶರು, ಹಾಸನ.